ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು-560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 02-02.2021

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

(ದಿನಾಂಕ 03-02-2021 ರಿಂದ 07-02-2021 ವರೆಗೆ)

| ನಿಯತಾಂಕಗಳು | 03.02.2021 | 04.02.2021 | 05.02.2021 | 06.02.2021 | 07.02.2021 |
|---|---|---|---|---|---|
| ಮಳೆ (ಮಿ ಮಿ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 29 | 28 | 28 | 28 | 28 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 16 | 15 | 16 | 15 | 16 |
| ಮೋಡ ( ಪ್ರಮಾಣ) | 1 | 1 | 2 | 2 | 2 |
| ಅರ್ದ್ರತೆ 7.20 ಬೆ (ಶೇ) | 85 | 83 | 83 | 81 | 81 |
| ಅರ್ದ್ರತೆ 2.20 ಮ (ಶೇ) | 74 | 74 | 72 | 72 | 71 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 3 | 2 | 3 | 2 | 2 |
| ಗಾಳಿಯ ದಿಕ್ಕು ( ಡಿಗ್ರಿ) | 103 | 103 | 112 | 124 | 158 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಮಳೆ0ಯಾಗುವ ಸಾಧ್ಯತೆ ಕಡಿಮೆ. ದಿನದ ಗರಿಷ್ಠ ಉಷ್ಣಾಂಶ 28.0–29.0$^{o}$ **C** ಮತ್ತು ಕನಿಷ್ಠ 15.0–16.0$^{o}$ **C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **81-85 %** ಇದ್ದು ಮಧ್ಯಾಹ್ನ **71-74 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **2-3** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

## ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ | ➢ ಕೊಯ್ಲು ಮಾಡಿದ ರಾಗಿ, ಜೋಳ, ತೊಗರಿ ಮತ್ತು ಇನ್ನಿತರ ದ್ವಿದಳ ಧಾನ್ಯಗಳನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ, ಒಕ್ಕಣೆ ಮಾಡಿ ಶುಚಿಗೊಳಿಸಿ ಚೀಲಗಳಲ್ಲಿ ಶೇಖರಣೆ ಮಾಡುವುದು.<br>➢ ಹಿಂಗಾರಿನಲ್ಲಿ ಬಿತ್ತನೆಯಾದ ಬೆಳೆಗಳಿಗೆ ನೀರು ಕೊಡಬೇಕು |
| ಮಾವು | ➢ ಕಳೆದ ಒಂದು ತಿಂಗಳಿನಿಂದ ಶುಷ್ಕ ವಾತಾವರಣವಿರುವುದರಿಂದ ಮಾವು ಬೆಳೆಯಲ್ಲಿ ಹೂ ಬಿಡುವ ಸಂಖ್ಯೆ ಹೆಚ್ಚಿದ್ದು ಮತ್ತು ಬೂದಿರೋಗದ ಸಂಭವ ಹೆಚ್ಚಾಗಿ ಕಂಡುಬಂದಿರುತ್ತದೆ.<br>➢ ಮಾವು : ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ) ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>➢ ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ. |
| | ಹೈನುಗಾರಿಕೆ |
| ಕೋಳಿ ಸಾಕಾಣಿಕಾ | ➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ-ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಮೊಟ್ಟೆಯಿಂದ ಮರಿಗಳ ಬಂದ ನಂತರ ಮೊದಲನೇ ವಾರದಲ್ಲಿ ಶಾಖದ ಬುಟ್ಟಿಯ ಕೆಳಗೆ ಬಿಡಬೇಕು ಮತ್ತು ಶಾಖದ ಬುಟ್ಟಿಯ ಅಂಚಿನಲ್ಲಿ ನೆಲಕ್ಕೆ ಹರಡಿರುವ ಸತ್ತೆಯಿಂದ 8 ಸೆ.ಮೀ. ಮೇಲೆ 35$^{0}$ ಸೆ. ಶಾಖ ಇರಬೇಕಾಗುತ್ತದೆ. ಅನಂತರ ವಾರಕ್ಕೆ 2$^{0}$ ಸೆ. ನಂತೆ ಕಡಿಮೆ ಮಾಡಿ, ನಾಲ್ಕು ವಾರಗಳ ನಂತರ ಬಿಸಿ ಬುಟ್ಟಿಗಳನ್ನು ತೆಗೆಯಬೇಕು. |

ನೋಡಲ್ ಅಧಿಕಾರಿ:
ಕೃಷಿ ಹವಾಮಾನ ವಿಭಾಗ
ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು